25
13/12

**ಕರ್ನಾಟಕ ಸರ್ಕಾರ**

ಸಂಖ್ಯೆ:ಸಿಆಸುಇ 132 ಆರ್‌ಟಿಐ 2012

ಕರ್ನಾಟಕ ಸರ್ಕಾರದ ಸಚಿವಾಲಯ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜನಸ್ಪಂದನ)
3ನೇ ಮಹಡಿ, ಪೋಡಿಯಂ ಬ್ಲಾಕ್,
ವಿಶ್ವೇಶ್ವರಯ್ಯ ಮುಖ್ಯ ಗೋಪುರ,
ಬೆಂಗಳೂರು, ದಿನಾಂಕ:21.11.2012

M. D.
11 DEC 2012
KPTCL

M.D. KPTCL

**ಸುತ್ತೋಲೆ**

ವಿಷಯ: ಕರ್ನಾಟಕ ಮಾಹಿತಿ ಹಕ್ಕು ನಿಯಮಗಳು 2005ರ ನಿಯಮ 14ರಲ್ಲಿ ತಿಳಿಸಿರುವ ಏಕ ವಸ್ತು ವಿಷಯಕ್ಕೆ ಸಂಬಂಧಿಸಿದ ಬಗ್ಗೆ.

---

Dir.(Admn)

ಕರ್ನಾಟಕ ಮಾಹಿತಿ ಹಕ್ಕು ನಿಯಮಗಳು 2005ರ ನಿಯಮ 14ರಲ್ಲಿ ಅರ್ಜಿದಾರರು ಮಾಹಿತಿ ಪಡೆಯುವುದಕ್ಕಾಗಿ ಲಿಖಿತ ಕೋರಿಕೆಯು ಒಂದು ವಸ್ತು ವಿಷಯಕ್ಕೆ ಸಂಬಂಧಿಸಿರತಕ್ಕದ್ದು ಮತ್ತು ಅದು ಸಾಮಾನ್ಯವಾಗಿ 150 ಪದಗಳಿಗೆ ಮೀರತಕ್ಕದ್ದಲ್ಲ. ಅರ್ಜಿದಾರನು ಒಂದಕ್ಕಿಂತ ಹೆಚ್ಚಿನ ವಸ್ತು ವಿಷಯಗಳ ಬಗ್ಗೆ ಮಾಹಿತಿ ಕೋರ ಬಯಸಿದ್ದರೆ ಪ್ರತ್ಯೇಕ ಅರ್ಜಿಗಳನ್ನು ಸಲ್ಲಿಸತಕ್ಕದ್ದು ಎಂದಿರುತ್ತದೆ. ಇದನ್ನು ಕೆಲವು ಸಾರ್ವಜನಿಕ ಪ್ರಾಧಿಕಾರಗಳು ತಪ್ಪಾಗಿ ಅರ್ಥ ಕಲ್ಪಿಸಿಕೊಂಡು ಒಂದು ವಿಷಯಕ್ಕೆ ಎಂಬುದರ ಬದಲಾಗಿ ಒಂದು ಪ್ರಶ್ನೆ ಎಂದು ಅರ್ಥ ಮಾಡಿಕೊಂಡು ಅರ್ಜಿದಾರರಿಗೆ ಮಾಹಿತಿ ಒದಗಿಸದೇ ಪ್ರತ್ಯೇಕವಾಗಿ ಅರ್ಜಿ ಸಲ್ಲಿಸುವಂತೆ ಅರ್ಜಿದಾರರಿಗೆ ತಿಳಿಸಿರುವುದು ಮತ್ತು ಇದೇ ವಿಷಯದ ಬಗ್ಗೆ ಅರ್ಜಿದಾರರು ಒಂದನೇ ಮೇಲ್ಮನವಿ ಸಲ್ಲಿಸಿದಾಗ್ಯೂ ಸಹ ಸಾರ್ವಜನಿಕ ಮಾಹಿತಿ ಅಧಿಕಾರಿ ನೀಡಿದ ಉತ್ತರವನ್ನೇ ತಿಳಿಸಿರುವುದು ಕಂಡು ಬಂದಿರುತ್ತದೆ. ಇದರಿಂದ ಅರ್ಜಿದಾರರು ರಾಜ್ಯ ಮಾಹಿತಿ ಆಯೋಗದಲ್ಲಿ 2ನೇ ಮೇಲ್ಮನವಿಯನ್ನು ಸಲ್ಲಿಸುತ್ತಿರುವುದು ಸರ್ಕಾರವು ಗಮನಿಸಿದೆ.

ಆದ್ದರಿಂದ ಕರ್ನಾಟಕ ಮಾಹಿತಿ ಹಕ್ಕು ನಿಯಮಗಳು 2005ರ ನಿಯಮ 14ರಲ್ಲಿ ಮಾಹಿತಿ ಕೋರಿಕೆಯ ಅರ್ಜಿಯು ಒಂದು ವಸ್ತು ವಿಷಯಕ್ಕೆ ಸಂಬಂಧಿಸಿರತಕ್ಕದ್ದು ಎಂಬುದನ್ನು ಒಂದು ಪ್ರಶ್ನೆಗೆ ಸಂಬಂಧಿಸಿರತಕ್ಕದ್ದು ಎಂದು ತಪ್ಪಾಗಿ ಅರ್ಥೈಸಿಕೊಳ್ಳಬಾರದು. ಕೋರಿಕೆ ಒಂದೇ ವಿಷಯಕ್ಕೆ ಸಂಬಂಧಿಸಿದ್ದು 150 ಪದಗಳಿಗೂ ಸ್ವಲ್ಪ ಹೆಚ್ಚಾಗಿದ್ದಾಗ್ಯೂ ಸಹ ಪರಿಗಣಿಸಿ ಅರ್ಜಿದಾರರಿಗೆ ಮಾಹಿತಿ ಒದಗಿಸುವಂತೆ ಮತ್ತು ಪ್ರತಿ ಪ್ರಶ್ನೆಗೆ ಪ್ರತ್ಯೇಕವಾಗಿ ಅರ್ಜಿ ಸಲ್ಲಿಸುವಂತೆ ತಿಳಿಸಬಾರದೆಂದು ಈ ಮೂಲಕ ಸೂಚಿಸಲಾಗಿದೆ.

(ಲ.ವೆಂಕಟಗಿರಿಯಪ್ಪ) 21/11/12
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜನಸ್ಪಂದನ – ಮಾಹಿತಿ ಹಕ್ಕು)

**ಇವರಿಗೆ.**

1.ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
2.ಎಲ್ಲಾ ಇಲಾಖಾ ಮುಖ್ಯಸ್ಥರುಗಳು
3.ಎಲ್ಲಾ ಜಿಲ್ಲಾಧಿಕಾರಿಗಳು / ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
4.ಎಲ್ಲಾ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು

**ಪ್ರತಿ:- ಮಾಹಿತಿಗಾಗಿ**

1.ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ
2.ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಆಸುಇ (ಜನಸ್ಪಂದನ)
3.ಸರ್ಕಾರದ ಅಪರ ಕಾರ್ಯದರ್ಶಿಗಳು, ಸಿಆಸುಇ (ಜನಸ್ಪಂದನ)
4.ಕಾರ್ಯದರ್ಶಿಗಳು, ಕರ್ನಾಟಕ ಮಾಹಿತಿ ಆಯೋಗ, ಬಹು ಮಹಡಿ ಕಟ್ಟಡ.
5.ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು

5978